ಪಿ.ಡಬ್ಲ್ಯೂ- 2

**ದಿನಾಂಕಃ 06-03-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀಮತಿ ಎ.ವಿ.ಕೆ. ಪಿರ್ಯಾದುದಾರರ ಪರ ವಕೀಲರಿಂದಃ**

ನಾನು ಪಿರ್ಯಾದುದಾರರ ಬ್ಯಾಂಕನಲ್ಲಿ ಅಸಿಸ್ಟೆಂಟ್ ಮ್ಯಾನೇಜರ ಎಂದು ಕರ್ತವ್ಯನಿರ್ವಹಿಸುತ್ತಿದ್ದು, ಈ ದಿನ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಸದರಿ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿರುತ್ತವೆ. ನಾನೇ ವಕೀಲರಿಗೆ ಮಾಹಿತಿಯನ್ನು ನೀಡಿರುತ್ತೇನೆ. ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಫಿರ್ಯಾದಿಗೆ ಪೂರಕವಾಗಿ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ಅಥೋರೈಜೆಶನ್ ಲೇಟರನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿ ನೀಡಿರುವ ಚೆಕ್‌ನ್ನು ನಿಪಿ-2 ಎಂದು ಅದರಲ್ಲಿರುವ ಆರೋಪಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು **ನಿಪಿ-2(ಎ)** ಎಂದು, ಬ್ಯಾಂಕ್‌ನವರು ನೀಡಿದ ಹಿಂಬರಹವನ್ನು **ನಿಪಿ-3** ಎಂದು, ದಿನಾಂಕಃ 27-02-2020 ರಂದು ಆರೋಪಿಗೆ ವಕೀಲರ ಮೂಲಕ ಕಳುಹಿಸಿದ ನೋಟಿಸನ ಕಛೇರಿ ಪ್ರತಿಯನ್ನು **ನಿಪಿ-4** ಎಂದು, ಸದರಿ ನೋಟಿಸ ಆರೋಪಿಯು ತೆಗೆದುಕೊಳ್ಳದೇ ಹಿಂದಿರುಗಿದ ಬಗ್ಗೆ ಮುಚ್ಚಿದ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-5** ಎಂದು, ಸದ್ರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆಯಲಾಗಿದ್ದು ಅದರೊಳಗಿದ್ದ ನೋಟಿಸನ ಪ್ರತಿಯನ್ನು **ನಿಪಿ-5(ಎ)** ಎಂದು ಗುರುತಿಸಲಾಯಿತು.

ಆರೋಪಿಯ ಪರ ವಕೀಲರು ಸಾಕ್ಷಿಯ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ನೀಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)**

ಓ ಹೇ ಕೇ ಸರಿ ಇದೆ.

-ಸಹಿ-

1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಹಾವೇರಿ.